# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 25.11.2011**

## ***ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸರ್ವಜ್ಞನಗರ ವಿಭಾಗದಲ್ಲಿ ದಿನಾಂಕ: 26.11.2011 ರಂದು ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.24, ಹೆಚ್.ಬಿ.ಆರ್. ಲೇಔಟ್ ವಾರ್ಡ್‌ನಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಕಾಮಗಾರಿ ಇಲಾಖೆಯ ಎಲ್ಲಾ ಅಭಿಯಂತರರು, ಕೆಲಸ ಪರಿವೀಕ್ಷಕರು, ಗ್ಯಾಂಗ್‌ಮೆನ್, ಪರಿಸರ ಇಲಾಖೆಯ ಅಭಿಯಂತರರು ಹಾಗೂ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಕರು, ಪೌರಕಾರ್ಮಿಕರುಗಳು ಭಾಗವಹಿಸಲಿದ್ದಾರೆ ಎಂದು ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 25.11.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಅಧಿಕೃತ / ಅನಧಿಕೃತವಾಗಿ ನೀರು ಸರಬರಾಜು ಮಾಡುವವರು ಲಾರಿ ಮತ್ತು ಟ್ರಾಕ್ಟರ್ ಮುಖಾಂತರ ಟ್ಯಾಂಕರ್‌ಗಳಲ್ಲಿ ನೀರು ಸರಬರಾಜು ಮಾಡುತ್ತಿದ್ದು, ತಮ್ಮ ಟ್ಯಾಂಕರ್‌ಗಳಿಗೆ ಸರಿಯಾಗಿ ಮುಚ್ಚಳ ಅಳವಡಿಸದೆ ಹಾಗೂ ವಾಲ್ವ್‌ಗಳ ಸೋರುವಿಕೆ ಹಾಗೂ ಇನ್ನೂ ಮುಂತಾದ ಕಾರಣಗಳಿಂದ ನೀರು ಸೋರಿಕೆಯಾಗಿ ರಸ್ತೆಯ ಮೇಲೆ ಚೆಲ್ಲಿ ರಸ್ತೆಗಳು ಹಾಳಾಗುವುದರ ಜೊತೆಗೆ ರಸ್ತೆಗಳಲ್ಲಿ ಗುಂಡಿಗಳು ಉಂಟಾಗುತ್ತಿರುವುದು ಕಂಡು ಬಂದಿರುತ್ತದೆ.

ಆದ್ದರಿಂದ ಪಾಲಿಕೆಯ ವತಿಯಿಂದ ಸೂಕ್ತ ಪರವಾನಿಗೆ ಪಡೆದು ಈ ದಿನದಿಂದ 8 ದಿನಗಳ ಒಳಗಾಗಿ ತಮ್ಮ ವಾಹನಗಳಿಂದ ನೀರು ಸೋರಿಕೆಯಾಗುವುದನ್ನು ತಡೆಗಟ್ಟಿ ನೀರು ಸರಬರಾಜು ಮಾಡಲು ಸೂಚಿಸಿದೆ. ಹಾಗೂ ಈ ಆದೇಶವನ್ನು ಉಲ್ಲಂಘಿಸಿ ಅನಧಿಕೃತವಾಗಿ ನೀರು ಸರಬರಾಜು ಮಾಡುವುದಾಗಲಿ ಅಥವಾ ನೀರು ಸೋರಿಕೆಯಾಗುವುದು ಕಂಡು ಬಂದಲ್ಲಿ ತಮ್ಮ ವಾಹನವನ್ನು ಜಪ್ತಿ ಮಾಡಿ, ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು ಎಂದು ಜಂಟಿ ಆಯುಕ್ತರು (ಮಹದೇವಪುರ) ವಲಯ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**